ಕಮಲಾಪುರ ಕ್ಷೇತ್ರದಲ್ಲಿನ ಜನರಲ್ ಹಾಸ್ಟೆಲ್‌ಗಳಿಗೆ ಕಟ್ಟಡ ಸೌಲಭ್ಯ ಒದಗಿಸುವುದು.

308(461)

ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪುರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಕಮಲಾಪುರ ಕ್ಷೇತ್ರದಲ್ಲಿ ಜನರಲ್ ಹಾಸ್ಟೆಲ್ ಬಿ.ಸಿ.ಎಂ. ಹಾಸ್ಟೆಲ್‌ಗಳು ಒಟ್ಟು ಎಷ್ಟಿವೆ?

ಆ) ಇವುಗಳ ಪೈಕಿ ಒಟ್ಟು ಎಷ್ಟು ಹಾಸ್ಟೆಲ್‌ಗಳಿಗೆ ಕಟ್ಟಡ ಸೌಲಭ್ಯಗಳಿವೆ; ಎಷ್ಟು ಹಾಸ್ಟೆಲ್‌ಗಳಿಗೆ ಕಟ್ಟಡ ಸೌಲಭ್ಯವಿರುವುದಿಲ್ಲ?

ಇ) ಕಟ್ಟಡ ಸೌಲಭ್ಯವಿಲ್ಲದ ಹಾಸ್ಟೆಲ್‌ಗಳಿಗೆ ಕಟ್ಟಡ ಸೌಲಭ್ಯವನ್ನು ಒದಗಿಸಿಕೊಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಗುಲ್ಬರ್ಗಾ ಜಿಲ್ಲೆಯ ಕಮಲಾಪುರ ಕ್ಷೇತ್ರದ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ 5 ವಿದ್ಯಾರ್ಥಿನಿಲಯಗಳು ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ 6 ವಿದ್ಯಾರ್ಥಿನಿಲಯಗಳು ಇರುತ್ತವೆ.

ಆ) ಸಮಾಜ ಕಲ್ಯಾಣ ಇಲಾಖೆಯಲ್ಲಿನ 5 ವಿದ್ಯಾರ್ಥಿನಿಲಯಗಳಲ್ಲಿ 3 ಹಾಸ್ಟೆಲ್‌ಗಳಿಗೆ ಕಟ್ಟಡವಿದ್ದು, ಉಳಿದ ಎರಡು ಹಾಸ್ಟೆಲ್‌ಗಳಿಗೆ ಕಟ್ಟಡಗಳಿರುವುದಿಲ್ಲ. ಹಿಂದುಳಿದ ವರ್ಗಗಳ ಇಲಾಖೆಯಲ್ಲಿನ 6 ವಿದ್ಯಾರ್ಥಿನಿಲಯಗಳಲ್ಲಿ 2 ವಿದ್ಯಾರ್ಥಿನಿಲಯಗಳಿಗೆ ಕಟ್ಟಡ ಇದ್ದು ಇನ್ನುಳಿದ 4 ವಿದ್ಯಾರ್ಥಿನಿಲಯಗಳಿಗೆ ಕಟ್ಟಡದ ಸೌಲಭ್ಯವಿರುವುದಿಲ್ಲ.

ಇ) ನಿವೇಶನ ಲಭ್ಯವಿರುವ ಸ್ಥಳದಲ್ಲಿ ಆಯವ್ಯಯದ ಲಭ್ಯತೆ ಮೇರೆಗೆ ಪರಿಶೀಲಿಸಿ ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣವನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲಾಗುವುದು.

310 (551)